ಸಂಖ್ಯೆ : ಕುವಿ/ಪವಿ/ಡಿಎಸ್-1/ D327/2021-22

ರಿಜಿಸ್ಟ್ರಾರ್ (ಮೌಲ್ಯಮಾಪನ) ರವರ ಕಛೇರಿ
ಜ್ಞಾನಸಹ್ಯಾದ್ರಿ ಶಂಕರಘಟ್ಟ – 577451
ಶಿವಮೊಗ್ಗ ಜಿಲ್ಲೆ
ದಿನಾಂಕ: 03-07-2021

## ಸುತ್ತೋಲೆ

ವಿಷಯ : ದೂರಶಿಕ್ಷಣದ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ದೂರಶಿಕ್ಷಣದ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ (ಪ್ರಥಮ ಮತ್ತು ದ್ವಿತೀಯ ಆವೃತ್ತಿ) ವಿದ್ಯಾರ್ಥಿಗಳನ್ನು ಆಂತರಿಕ ಅಂಕಗಳ ಆಧಾರದ ಮೇಲೆ Promote (Result) ಮಾಡುವ ಕುರಿತು.

ಉಲ್ಲೇಖ : 1) ಸುತ್ತೋಲೆ ಸಂಖ್ಯೆ: ಕುವಿ/ಪವಿ/ಡೆಸ್-1/ಡಿ245/2021-22, ದಿನಾಂಕ: 30-05-2021
2) ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಕುವಿ / ಪವಿ / ಡೆಸ್-1 / ಡಿ248 / 2021-22, ದಿನಾಂಕ: 05-06-2021
3) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:03-07-2021

******

ಈಗಾಗಲೇ "ತೆರೆದ ಪುಸ್ತಕ ಪರೀಕ್ಷೆ" (Open Book Exam) ಮಾದರಿಯಲ್ಲಿ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ದೂರಶಿಕ್ಷಣದ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ (ಪ್ರಥಮ ಮತ್ತು ದ್ವಿತೀಯ ಆವೃತ್ತಿ) ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ನಡೆಸಲು ಉಲ್ಲೇಖಿತ (1)ರ ಸುತ್ತೋಲೆಯಲ್ಲಿ ತೀರ್ಮಾನಿಸಲಾಗಿತ್ತು. ಹಾಗೂ ಉಲ್ಲೇಖಿತ (2)ರ ತಿದ್ದುಪಡಿ ಅಧಿಸೂಚನೆಯಲ್ಲಿ ನಿಗದಿ ಪಡಿಸಲಾಗಿದ್ದ ಪರೀಕ್ಷಾ ದಿನಾಂಕವನ್ನು ಮುಂದೂಡಲಾಗಿದೆ. ಆದರೆ, ಕೆಲವೊಂದು ತಾಂತ್ರಿಕ ತೊಂದರೆಗಳಿಂದ ಸದ್ಯಕ್ಕೆ ನಿಲ್ಲಿಸಲಾಗಿದ್ದು, ತಾಂತ್ರಿಕ ತೊಂದರೆಗಳನ್ನು ಗಮನದಲ್ಲಿಟ್ಟುಕೊಂಡು ಹಾಗೂ ಮಾನ್ಯ ಕುಲಪತಿಗಳು ಮತ್ತು ಕುಲಸಚಿವ(ಆಡಳಿತ) ಇವರುಗಳೊಂದಿಗೆ ಚರ್ಚೆ ಮಾಡಿ "ತೆರೆದ ಪುಸ್ತಕ ಪರೀಕ್ಷೆ" (Open Book Exam) ಮಾದರಿಯಲ್ಲಿ ಪರೀಕ್ಷೆಗಳನ್ನು ನಡೆಸುವುದನ್ನು ಹಿಂಪಡೆಯಲಾಗಿದೆ. ಆಂತರಿಕ ಅಂಕ ಪಡೆದಿರುವ ಆಧಾರದ ಮೇಲೆ ಮತ್ತು ಸರ್ಕಾರದ ಮಾರ್ಗಸೂಚನೆಯಂತೆ Promote (Result) ಮಾಡಲು ತೀರ್ಮಾನಿಸಲಾಗಿದೆ.

ಮಾನ್ಯ ಕುಲಪತಿಗಳ ಆದೇಶದಂತೆ ಎಲ್ಲಾ ದೂರಶಿಕ್ಷಣದ ಅಧ್ಯಯನ ಕೇಂದ್ರಗಳ ಪ್ರಾಂಶುಪಾಲರುಗಳು / ಸಂಯೋಜನಾಧಿಕಾರಿಗಳು ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಬರೆದಿರುವ I.A. Book (Blue Book) ಗಳನ್ನು ಪಡೆದು ಹಾಗೂ ಅವುಗಳನ್ನು ಕುಲಸಚಿವ(ಆಡಳಿತ) ರವರ ಸಹಿಯೊಂದಿಗೆ ಒಂದು ವಾರದೊಳಗಾಗಿ Blue Book ಗಳನ್ನು ಕುಲಸಚಿವ(ಪರೀಕ್ಷಾಂಗ)ರವರಿಗೆ ಮೌಲ್ಯಮಾಪನಕ್ಕಾಗಿ ಸಲ್ಲಿಸಲು ಸೂಚಿಸಲಾಗಿದೆ.

ಕುಲಸಚಿವ(ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ-577 451.

ಗೆ,

1. ನಿರ್ದೇಶಕರು, ದೂರಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಎಲ್ಲಾ ದೂರಶಿಕ್ಷಣ ಅಧ್ಯಯನ ಕೇಂದ್ರಗಳ ಸಂಯೋಜನಾಧಿಕಾರಿಗಳಿಗೆ
3. ಪ್ರಾಂಶುಪಾಲರು, ಸಹ್ಯಾದ್ರಿ ಕಲಾ / ವಿಜ್ಞಾನ / ವಾಣಿಜ್ಯ ಕಾಲೇಜು, ಶಿವಮೊಗ್ಗ
4. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಕಡೂರು
5. ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಚಿಕ್ಕಮಗಳೂರು

ಪ್ರತಿಗಳು:

1. ಆಪ್ತ ಕಾರ್ಯಾಲಯ ಮಾನ್ಯ ಕುಲಪತಿಗಳು/ಕುಲಸಚಿವರು/ಕುಲಸಚಿವರು (ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ವಿಶ್ವವಿದ್ಯಾಲಯದ ಎಲ್ಲಾ ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ.
3. ಉಪಕುಲಸಚಿವರು/ಸಹಾಯಕ ಕುಲಸಚಿವರು/ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
4. ತಾಂತ್ರಿಕ ಸಹಾಯಕರು, ಕಂಪ್ಯೂಟರ್ (ಪರೀಕ್ಷಾಂಗ) ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
5. ಸಂಯೋಜಕರು, ಹೊರಗುತ್ತಿಗೆ ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
6. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾಲಯ ಕೇಂದ್ರಿಯ ಗಣಕಕಾರ್ಯ ಸೌಲಭ್ಯ ಮತ್ತು ಮಾಹಿತಿ ತಂತ್ರಜ್ಞಾನ ಘಟಕ (ಯು.ಸಿ.ಸಿ.ಎಫ್.), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
7. ಕಛೇರಿ ಪ್ರತಿ.